ದಿನಾಂಕ 03-11-2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ವಾದಿಯ ಪರ ಶ್ರೀ ಎಸ್.ಕೆ.ಡಿ ವಕೀಲರಿಂದ:**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ಸತ್ಯದಿಂದ ಕೂಡಿದ್ದು, ಪ್ರಮಾಣ ಪತ್ರದಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಹನುಮನಕೊಪ್ಪ ಗ್ರಾಮದ ಸ ನಂ: 125/1 ರ ಜಮೀನಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-1 ಎಂದು, ಬಾಳಿಹಳ್ಳಿ ಗ್ರಾಮದ ಸ ನಂ: 96 ರ ಜಮೀನಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-2 ಎಂದು, ಬಾಳಿಹಳ್ಳಿ ಗ್ರಾಮದ ಸ ನಂ: 95/2 ರ ಜಮೀನಿನ ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿದ್ದು, ಅದನ್ನು ನಿ.ಪಿ-3 ಎಂದು, ನಮೂನೆ-12 ರ ಮುಟೇಷನ್ ರಿಜಿಸ್ಟರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-4 ಎಂದು, ಡ ಸಂ: 624 ರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-5 ಎಂದು, ನಮೂನೆ-12 ರ ಮುಟೇಷನ್ ರಿಜಿಸ್ಟರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-6 ಎಂದು, ಫಾರಂ ಸಂ: 10 ರ 2- ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿ.ಪಿ-7 ಮತ್ತು 8 ಎಂದು, ಎಲ್ ಆರ್ ಎಂ ಎಸ್ ಆರ್ ಸಂ: 137-105+108 ರಲ್ಲಿ ಭೂ ನ್ಯಾಯ ಮಂಡಳಿ ಹಾನಗಲ್ಲ ಹೊರಡಿಸಿದ ಆದೇಶದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-9 ಎಂದು, ಫಾರಂ ಸಂ:7 ರ 2- ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅವುಗಳನ್ನು ನಿ.ಪಿ-10 ಮತ್ತು 11 ಎಂದು, ಎಲ್ ಆರ್ ಎಂ ಎಸ್ ಆರ್ ಸಂ: 137/105+108 ರಲ್ಲಿ ಭೂ ನ್ಯಾಯ ಮಂಡಳಿ ಹಾನಗಲ್ಲ

ಹೊರಡಿಸಿದ ಆದೇಶದ ದೃಢೀಕೃತ  ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-12 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ 1 ಮತ್ತು 2 ನೇ ಪ್ರತಿವಾದಿಗಳ ಪರ ವಕೀಲರಿಂದಃ**

ಸದರಿ ಪ್ರತಿವಾದಿಗಳು ಮತ್ತು ವಕೀಲರು ಗೈರು ಹಾಜರು. ಪ್ರತಿವಾದ ಪತ್ರವನ್ನು ಸಲ್ಲಿಸಿರುವುದಿಲ್ಲ. ಉಳಿದ ಪ್ರತಿವಾದಿಗಳು ಏಕಪಕ್ಷೀಯವಾಗಿರುತ್ತಾರೆ. ಆದ್ದರಿಂದ ಪಾಟೀ ಸವಾಲನ್ನು ಇಲ್ಲಾ ಎಂದು ತೆಗೆದುಕೊಳ್ಳಲಾಯಿತು.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೆ ಸರಿ ಇದೆ  ಎಂದು ಒಪ್ಪಿರುತ್ತಾರೆ.**

**Sd/-**

**ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ಹಾನಗಲ್ಲ.**

ಸಾಕ್ಷಿದಾರರ ಸಹಿ